ಅ) ಸೌರಶಕ್ತಿ ವಿದ್ಯುತ್‌ನ ಪ್ರತಿಯಂನಿಟಿಗೆ ತಗುಲುವ ವೆಚ್ಚವೆಷ್ಟು?

ಇ) ಸೌರಶಕ್ತಿ ವಿದ್ಯುತ್ ಯೋಜನೆಯನ್ನು ಇದುವರೆವಿಗೂ ಎಷ್ಟು ಕಡೆ ಅಳವಡಿಸಲಾಗಿದೆ?

ಶ್ರೀ ಎಸ್. ಆರ್. ಬೊಮ್ಮಾಯಿ (ಮುಖ್ಯ ಮಂತ್ರಿಗಳು).—

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಆರೋಗ್ಯ ಘಟಕಗಳನ್ನು ಆರೋಗ್ಯ ಕೇಂದ್ರಗಳನ್ನಾಗಿ ಪರಿವರ್ತಿಸುವುದು

೨೯೬೭ ಶ್ರೀ ಬಿ. ಆರ್. ವೀಲಕಂಠಪ್ಪ (ತರೀಕೆರೆ) .—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ತರೀಕೆರೆ ತಾಲ್ಲೂಕಿನ ಹುಣಸೇಘಟ್ಟ ಮತ್ತು ಲಕ್ಕವಳ್ಳಿ ಪ್ರಾಥಮಿಕ ಆರೋಗ್ಯ ಘಟಕಗಳನ್ನು ಆರೋಗ್ಯ ಕೇಂದ್ರವನ್ನಾಗಿ ಪರಿವರ್ತಿಸಲು ಜಿಲ್ಲಾ ಪರಿಷತ್ತಿನಿಂದ ಸರ್ಕಾರಕ್ಕೆ ಮನವಿಗಳೇನಾದರೂ ಬಂದಿದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಪರಿವರ್ತಿಸಲು ಅನುಮತಿ ಕೊಡುವಿರಿ?

ಶ್ರೀ ಎಸ್. ಆರ್. ಬೊಮ್ಮಾಯಿ (ಮುಖ್ಯ ಮಂತ್ರಿಯವರು) .—

ಅ) ಬಂದಿದೆ

ಆ) ೧೯೮೮-೮೯ನೇ ಸಾಲಿನ ಗುರಿಯಲ್ಲಿ ಈ ಗ್ರಾಮಗಳಿಗೆ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮಂಜೂರು ಮಾಡುವ ವಿಷಯ ಸರ್ಕಾರದ ಪರಿಶೀಲನೆಯಲ್ಲಿದೆ.

ಸಹಕಾರ ಇಲಾಖೆಯ ಅಸಿಸ್ಟೆಂಟ್ ರಿಜಿಸ್ಟ್ರಾರ್‌ಗಳಿಗೆ ಪ್ರಭಾರ ಹುದ್ದೆಯ ಮೇಲೆ ಡೆಪ್ಯೂಟಿ ರಿಜಿಸ್ಟ್ರಾರ್ ಆಗಿ ಬಡ್ತಿ ನೀಡಿರುವುದು

೨೯೭೪ ಶ್ರೀಮತಿ ಕೆ. ಎಸ್. ನಾಗರತ್ನಮ್ಮ, (ಗುಂಡ್ಲು ಪೇಟೆ).—ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸಹಕಾರ ಇಲಾಖೆಯಲ್ಲಿನ ಎಷ್ಟು ಜನ ಅಸಿಸ್ಟೆಂಟ್ ರಿಜಿಸ್ಟ್ರಾರ್‌ಗಳಿಗೆ ಪ್ರಭಾರ ಹುದ್ದೆಯ ಮೇಲೆ ಡೆಪ್ಯೂಟಿ ರಿಜಿಸ್ಟ್ರಾರ್ ಆಗಿ ಬಡ್ತಿ ನೀಡಲಾಗಿದೆ ಹಾಗೂ ಅದನ್ನು ಯಾವ ದಿನಾಂಕ ದಿಂದ ನೀಡಲಾಗಿದ ?

ಆ) ಸದರಿ ಹುದ್ದೆಗಳನ್ನು ಬಡ್ತಿಯ ಮೂಲಕ ಭರ್ತಿ ಮಾಡಿದ್ದರು ಈವರೆವಿಗೂ ಪಾಯ ಮಾಡದೆ ಇರುವುದಕ್ಕೆ ಕಾರಣಗಳೇನು ?

ಇ) ಇದನ್ನು ಸರಿಪಡಿಸಲು ಸರ್ಕಾರದವರು ಕೂಡಲೇ ಕ್ರಮ ಕೈಗೊಳ್ಳಲು ಉದ್ದೇಶಿಸಿದ್ದಾರೆಯೇ ?

ಈ) ಹಾಗಿದ್ದಲ್ಲಿ ಯಾವಾಗ ಕ್ರಮ ಕೈಗೊಳ್ಳಲಾಗುವುದು ?